# <u>ಕರ್ನಾಟಕ ಸರ್ಕಾರದ ನಡವಳಿಗಳು</u>

**ವಿಷಯ:** ಬಿಬಿಎಂಪಿ ವ್ಯಾಪ್ತಿಯ ಶಿವಾಜಿನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ ಸಂಬಂಧಿಸಿದಂತೆ "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ" ಯೋಜನೆಯಡಿ ನಿಗಧಿಪಡಿಸಿರುವ ರೂ.80.00 ಕೋಟಿಗಳ ಅಂದಾಜು ಮೊತ್ತದ ಕಾಮಗಾರಿಗಳ ಕ್ರಿಯಾ ಯೋಜನೆಗೆ ಸರ್ಕಾರದ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:**

1. ಮಾನ್ಯ ಮುಖ್ಯಮಂತ್ರಿಗಳು ದಿನಾಂಕ: 15-08-2021 ರಂದು ಭಾರತದ ಸ್ವಾತಂತ್ರ್ಯೋತ್ಸವದ 75ನೇ ವರ್ಷದ ಆಚರಣೆ ಸಂದರ್ಭದಲ್ಲಿ ಮಾಡಿರುವ ಘೋಷಣೆ.
2. ಸರ್ಕಾರದ ಆದೇಶ ಸಂಖ್ಯೆ: ನಅಇ 197 ಎಂಎನ್‌ವೈ 2021 (ಇ), ದಿನಾಂಕ: 14-01-2022.
3. ಸರ್ಕಾರದ ಆದೇಶ ಸಂಖ್ಯೆ: ನಅಇ 197 ಎಂಎನ್‌ವೈ 2021 (ಇ), ದಿನಾಂಕ: 25-02-2022 (24).
4. ಮುಖ್ಯ ಆಯುಕ್ತರು, ಬಿಬಿಎಂಪಿ ಇವರ ಪತ್ರ ಸಂಖ್ಯೆ: ಮುಆ/ಪಿಆರ್/ಜಿ-178/22-23, ದಿನಾಂಕ: 28-04-2022.

*****

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ: (1) ರಲ್ಲಿ ಓದಲಾದ ದಿನಾಂಕ: 15-08-2021 ರಂದು ಭಾರತದ ಸ್ವಾತಂತ್ರ್ಯೋತ್ಸವದ 75ನೇ ವರ್ಷದ ಆಚರಣೆ ಸಂದರ್ಭದಲ್ಲಿ ಮಾನ್ಯ ಮುಖ್ಯಮಂತ್ರಿಗಳು ಮಾಡಿರುವ ಸ್ವಾತಂತ್ರ್ಯೋತ್ಸವ ಭಾಷಣದಲ್ಲಿ ಬೆಂಗಳೂರು ನಗರದಲ್ಲಿ ಬಿಬಿಎಂಪಿ ಮೂಲಕ ಮುಖ್ಯ ಮೂಲಭೂತ ಸೌಕರ್ಯ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಅಮೃತ ನಗರೋತ್ಥಾನ ಯೋಜನೆ ಅಡಿಯಲ್ಲಿ ರೂ.6000.00 ಕೋಟಿಗಳನ್ನು ಒದಗಿಸಲಾಗುವುದು ಎಂದು ಘೋಷಿಸಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ: (2) ರಲ್ಲಿ ಓದಲಾದ ದಿನಾಂಕ: 14-01-2022ರ ಆದೇಶದಲ್ಲಿ, ಮಾನ್ಯ ಮುಖ್ಯಮಂತ್ರಿಗಳು ದಿನಾಂಕ: 15-08-2021 ರಂದು ಭಾರತದ ಸ್ವಾತಂತ್ರ್ಯೋತ್ಸವದ 75ನೇ ವರ್ಷದ ಸಂದರ್ಭದಲ್ಲಿ ಘೋಷಿಸಿದ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳಿಗೆ ಸಂಬಂಧಿಸಿದ ರೂ.6000.00 ಕೋಟಿಗಳ ಅಂದಾಜು ಮೊತ್ತದಲ್ಲಿ ಕೈಗೊಳ್ಳುವ "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ" ಯೋಜನೆಗೆ ಸರ್ಕಾರದ ತಾತ್ವಿಕ ಅನುಮೋದನೆ ನೀಡಿ ಆದೇಶಿಸಿದೆ.

ಮೇಲೆ ಕ್ರಮ ಸಂಖ್ಯೆ: (3) ರಲ್ಲಿ ಓದಲಾದ ದಿನಾಂಕ: 25-02-2022 (25) ರ ಆದೇಶದಲ್ಲಿ, ಸರ್ಕಾರದ ಆದೇಶ ಸಂಖ್ಯೆ: ನಅಇ 197 ಎಂಎನ್‌ವೈ 2021 (ಇ), ದಿನಾಂಕ: 14-01-2022 ರಂತೆ ಅನುಮೋದಿಸಲಾಗಿರುವ "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ" ಯೋಜನೆಗೆ ಸಂಬಂಧಿಸಿದಂತೆ ಶಿವಾಜಿನಗರ ವಿಧಾನ ಸಭಾ ಕ್ಷೇತ್ರಕ್ಕೆ ರೂ.80.00 ಕೋಟಿಗಳ ಅನುದಾನವನ್ನು ನಿಗಧಿಗೊಳಿಸಿ ಆದೇಶಿಸಲಾಗಿರುತ್ತದೆ.

...2/-

ಮೇಲೆ ಕ್ರಮ ಸಂಖ್ಯೆ: (4) ರಲ್ಲಿ ಓದಲಾದ ದಿನಾಂಕ: 28-04-2022 ರ ಪತ್ರದಲ್ಲಿ, ಮುಖ್ಯ ಆಯುಕ್ತರು, ಬಿಬಿಎಂಪಿ ರವರು, ಮಾನ್ಯ ಮುಖ್ಯಮಂತ್ರಿಗಳು ದಿನಾಂಕ: 15-08-2021 ರಂದು ಭಾರತದ ಸ್ವಾತಂತ್ರ್ಯೋತ್ಸವದ 75ನೇ ವರ್ಷದ ಸಂದರ್ಭದಲ್ಲಿ ಘೋಷಿಸಿದ್ದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮೂಲ ಸೌಕರ್ಯ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು "ಅಮೃತ ನಗರೋತ್ಥಾನ ಯೋಜನೆ" ಅಡಿಯಲ್ಲಿ ರೂ.6000.00 ಕೋಟಿಗಳನ್ನು ಒದಗಿಸಲಾಗುವುದೆಂದು ಘೋಷಿಸಿರುತ್ತಾರೆ. ಸರ್ಕಾರದ ಆದೇಶ ಸಂಖ್ಯೆ: ನಅಇ 197 ಎಂಎನ್ ವೈ 2021 (ಇ), ದಿನಾಂಕ: 25-02-2022 (19) ರಂತೆ ಶಿವಾಜಿನಗರ ವಿಧಾನಸಭಾ ಕ್ಷೇತ್ರಕ್ಕೆ ರೂ.80.00 ಕೋಟಿಗಳ ಅನುದಾನ ನಿಗಧಿಪಡಿಸಿ ದಿನಾಂಕ: 25-02-2022 ರಂದು ಆದೇಶಿಸಿರುತ್ತಾರೆ.

ಅದರಂತೆ ಸರ್ಕಾರವು ನಿಗಧಿಪಡಿಸಿರುವ ಅನುದಾನದಡಿಯಲ್ಲಿ ರಸ್ತೆ ಅಭಿವೃದ್ಧಿ, ಉದ್ಯಾನವನಗಳ ಅಭಿವೃದ್ಧಿ ಮತ್ತು ನಿರ್ವಹಣೆ, ಕಟ್ಟಡಗಳ ಅಭಿವೃದ್ಧಿ, ಘನತ್ಯಾಜ್ಯ ಸಂಸ್ಕರಣಾ ಘಟಕದ ಸುತ್ತಮುತ್ತಲಿನ ಪ್ರದೇಶಗಳ ಅಭಿವೃದ್ಧಿ, ಬೀದಿ ದೀಪಗಳ ನಿರ್ವಹಣೆ ಹಾಗೂ ಇತ್ಯಾದಿ ಮೂಲಭೂತ ಸೌಕರ್ಯಗಳನ್ನು ಕೈಗೊಳ್ಳಲು ಕ್ರಿಯಾ ಯೋಜನೆ ಅಂತಿಮಗೊಳಿಸುವ ಸಂದರ್ಭದಲ್ಲಿ ಮಾನ್ಯ ವಿಧಾನಸಭಾ ಕ್ಷೇತ್ರದ ಶಾಸಕರ ಕೋರಿಕೆಗಳನ್ನು ಪರಿಗಣಿಸಿ ಕ್ರಿಯಾ ಯೋಜನೆ ಅಂತಿಮಗೊಳಿಸುವಂತೆ ಸೂಚಿಸಿರುತ್ತಾರೆ.

ಆದುದರಿಂದ, ಮಾನ್ಯ ಶಾಸಕರು, ಶಿವಾಜಿನಗರ ವಿಧಾನಸಭಾ ಕ್ಷೇತ್ರ ರವರು ಸೂಚಿಸಿರುವ ಹಾಗೂ ಮುಖ್ಯ ಅಭಿಯಂತರರು ಪೂರ್ವ ರವರು ಸಲ್ಲಿಸಿರುವ ಪ್ರಸ್ತಾವನೆಯಂತೆ ಶಿವಾಜಿನಗರ ವಿಧಾನಸಭಾ ಕ್ಷೇತ್ರಕ್ಕೆ ಮೀಸಲಿಟ್ಟಿರುವ ರೂ.80.00 ಕೋಟಿಗಳ ಅನುದಾನದಡಿಯಲ್ಲಿ ಕೈಗೊಳ್ಳುವ ಕಾಮಗಾರಿಗಳಿಗೆ ತಯಾರಿಸಿರುವ ಕ್ರಿಯಾ ಯೋಜನೆಯ ಪಟ್ಟಿಗೆ ಸರ್ಕಾರದ ಅನುಮೋದನೆ ನೀಡುವಂತೆ ಮುಖ್ಯ ಆಯುಕ್ತರು ಬಿಬಿಎಂಪಿ ರವರು ಕೋರಿರುತ್ತಾರೆ.

ಬಿಬಿಎಂಪಿ ಮುಖ್ಯ ಆಯುಕ್ತರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 241 ಎಂಎನ್‌ವೈ 2022 (ಇ),**
**ಬೆಂಗಳೂರು, ದಿನಾಂಕ: 18-05-2022.**

ಸರ್ಕಾರದ ಆದೇಶ ಸಂಖ್ಯೆ: ನಅಇ 197 ಎಂಎನ್‌ವೈ 2021 (ಇ), ದಿನಾಂಕ: 25-02-2022 (24) ರಂತೆ "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ" ಯೋಜನೆಯಡಿ ಶಿವಾಜಿನಗರ ವಿಧಾನ ಸಭಾ ಕ್ಷೇತ್ರಕ್ಕೆ ರೂ.80.00 ಕೋಟಿಗಳ ಅನುದಾನವನ್ನು ನಿಗದಿಗೊಳಿಸಿ ಆದೇಶಿಸಿದ್ದು, ಬಿಬಿಎಂಪಿ ಮುಖ್ಯ ಆಯುಕ್ತರ ಪ್ರಸ್ತಾವನೆಯಂತೆ, ಸದರಿ ರೂ.80.00 ಕೋಟಿಗಳ ಅಂದಾಜು ಮೊತ್ತದ ಈ ಕೆಳಕಂಡ ಕಾಮಗಾರಿಗಳ ಕ್ರಿಯಾಯೋಜನೆ ಪಟ್ಟಿಗೆ ಈ ಆದೇಶದಲ್ಲಿ ನಮೂದಿಸಿರುವ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮೋದನೆ ನೀಡಿ ಆದೇಶಿಸಿದೆ.

| Sl. No. | Ward No. | Name of the Work | Est Cost (Rs. In Lakhs) |
|---|---|---|---|
| | 90 | Construction to Football Stadium at Halasuru in ward no. 90 | 800.00 |

...3/-

| | | | |
|---|---|---|---|
| 2) | 90 | Construction to Convention Hall at Halasuru in ward no.90 | 400.00 |
| 3) | 90 | Construction to Primary health Care Centre at Halasuru in ward no.90 | 100.00 |
| 4) | 92 | Construction of Women & children Welfare Centre at Neharupuram in ward no. 92 | 400.00 |
| 5) | 92 | Construction to Convention Hall and Fitness Centre at HKP road in ward no.92 | 400.00 |
| 6) | 92 | Construction to Education and Skill development Centre (Library, Computer training) at Shivajinagar in ward no.92 | 100.00 |
| 7) | 92 | Construction to Multipurpose sports Centre in ward no.92 Shivajinagar | 350.00 |
| 8) | 63 | Construction of Women & Children welfare centre at Jayamahal in ward no.63 | 400.00 |
| 9) | 110 | Providing Gym Equipment to SR nagar Gym in Ward No.110 | 50.00 |
| 10) | 63, 93 and 92 | Comprehensive development to light tender sure Roads in 1st Main and 4th Main road in SR Nagar surrounding area in ward no.110 & Footpath and Road development works to Jayamahal Link road in ward no.63 & Resurfacing to Serpentine road in ward no. 93 & Shivaji road in Ward No.92 | 1500.00 |
| 11) | 90 and 91 | Comprehensive development of Cross roads, footpaths at Kodandaram Lay out, Cart Street, ThoppeModaliar Street, AshoorKhanaand surrounding area in ward no. 90 and ward no.91 | 1000.00 |
| 12) | 92 and 93 | Comprehensive development of Cross roads and footpaths at Shivaji road cross road, Madhavanagar, Broadway cross road, New Market, Obedulla road and surrounding area in ward no. 92 & 93. | 1000.00 |
| 13) | 63 | Comprehensive development of Cross roads and footpaths at Jayamahal Gangabhavani Extension, Marappa Garden, Benson town, Kargappa Garden, Veerapillai Street & SR Nagar surrounding area in ward no 63 & in ward no. 110 and Improvements to Park in ward no.63 | 1000.00 |
| 14) | 62, 63, 93, 110, 90, 91 and 92 | Improvements to drinking water system in Ward No. 62, 63, 93, 110, 90, 91 and 92 | 500.00 |
| | | **TOTAL** | **8000.00** |

. . .4/-

**ಷರತ್ತುಗಳು:**

1. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಶಿವಾಜಿನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ವಿವಿಧ ಮೂಲಭೂತ ಸೌಕರ್ಯ ಮತ್ತು ರಸ್ತೆಗಳ ದುರಸ್ತಿ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಒಟ್ಟು ರೂ.80.00 ಕೋಟಿಗಳ ಅಂದಾಜು ಮೊತ್ತದ ಕ್ರಿಯಾ ಯೋಜನೆಗೆ ಅನುಮೋದನೆ ನೀಡಿದ್ದು, ಅನುವು ಮಾಡಿರುವ ರೂ.80.00 ಕೋಟಿಗಳಿಗೆ ಮೀರಿದ ಯಾವುದೇ ವೆಚ್ಚ ಮತ್ತು ಟೆಂಡರ್ ಪ್ರೀಮಿಯಂಗಾಗಿ ಮಾಡುವ ವೆಚ್ಚವನ್ನು ಬಿಬಿಎಂಪಿಯು ತನ್ನ ಸ್ವಂತ ಅನುದಾನದಿಂದ ಭರಿಸತಕ್ಕದ್ದು. ಟೆಂಡರ್ ಪ್ರೀಮಿಯಂ ಮೊತ್ತವನ್ನು ಅಂದಾಜಿನಲ್ಲಿ ಅನುವು ಮಾಡತಕ್ಕದ್ದಲ್ಲ.
2. ಸದರಿ ಕಾಮಗಾರಿಗಳನ್ನು ರೂ.10.00 ಕೋಟಿಗಳಿಗೆ ಕಡಿಮೆ ಇರದಂತೆ ಪ್ಯಾಕೇಜ್ ಗಳನ್ನು ಮಾಡಿ, ಪ್ಯಾಕೇಜ್ ಕಾಮಗಾರಿಗಳನ್ನು ಕೆ.ಟಿ.ಪಿ.ಪಿ ಕಾಯ್ದೆ-1999 ಮತ್ತು ಕೆ.ಟಿ.ಪಿ.ಪಿ ನಿಯಮಗಳು-2000 ಹಾಗೂ e-procurement ಮುಖಾಂತರ ಕೈಗೊಂಡು, ಟೆಂಡರ್ ಗಳಿಗೆ ಸರ್ಕಾರದ ಆದೇಶ ಸಂಖ್ಯೆ: ನಅಇ 47 ಎಸ್.ಎಫ್.ಸಿ 2016, ಬೆಂಗಳೂರು, ದಿನಾಂಕ: 14-06-2016 ಮತ್ತು 03-11-2016 ರಂತೆ ಸಕ್ಷಮ ಪ್ರಾಧಿಕಾರದ ಅನುಮೋದನೆಯನ್ನು ಪಡೆದು, ಕಾಮಗಾರಿಗಳನ್ನು ಮುಂದಿನ ಎರಡು ವರ್ಷಗಳಲ್ಲಿ ಹಂತ ಹಂತವಾಗಿ ಅನುಷ್ಠಾನಗೊಳಿಸುವುದು. ಯಾವುದೇ ಕಾಮಗಾರಿಗಳನ್ನು ವಿಭಜಿಸತಕ್ಕದ್ದಲ್ಲ.
3. ಈ ಕ್ರಿಯಾ ಯೋಜನೆಯಲ್ಲಿ ಒಳಗೊಂಡಿರುವ ಕಾಮಗಾರಿಗಳು ಇತರೆ ಯಾವುದೇ ಯೋಜನೆ / ಅನುದಾನದಡಿಯಲ್ಲಿ ಪುನರಾವರ್ತನೆಯಾಗಿರುವುದಿಲ್ಲ ಎಂಬ ಬಗ್ಗೆ, ಮುಖ್ಯ ಆಯುಕ್ತರು, ಬಿಬಿಎಂಪಿ ರವರು ಪೂರ್ವಾನ್ವಯವಾಗಿ ಖಚಿತ ಪಡಿಸಿಕೊಂಡು ಟೆಂಡರ್ ಆಹ್ವಾನಿಸತಕ್ಕದ್ದು.
4. ಅನುಮೋದಿತ ಕ್ರಿಯಾಯೋಜನೆಯಲ್ಲಿ ಎಸ್.ಸಿ.ಎಸ್.ಪಿ / ಟಿ.ಎಸ್.ಪಿ ಕಾಯ್ದೆ ಪ್ರಕಾರ ಕಾಮಗಾರಿಗಳನ್ನು ಅಳವಡಿಸಿಕೊಂಡು ಟೆಂಡರ್ ಕರೆದು ಅನುಷ್ಠಾನಗೊಳಿಸುವುದು ಬಿಬಿಎಂಪಿಯ ಮುಖ್ಯ ಆಯುಕ್ತರ ವೈಯಕ್ತಿಕ ಜವಾಬ್ದಾರಿಯಾಗಿರುತ್ತದೆ. ಈ ಆದೇಶ ಹೊರಡಿಸಿದ ಒಂದು ತಿಂಗಳೊಳಗಾಗಿ ಬಿಬಿಎಂಪಿಯ ಮುಖ್ಯ ಆಯುಕ್ತರು ತಮ್ಮ ಹಂತದಲ್ಲಿ ಕ್ರಿಯಾ ಯೋಜನೆಯ ಕಾಮಗಾರಿಗಳನ್ನು ಎಸ್.ಸಿ.ಎಸ್.ಪಿ / ಟಿ.ಎಸ್.ಪಿ ಕಾಯ್ದೆ ಪ್ರಕಾರ ಕಾಮಗಾರಿಗಳಾಗಿ ವಿಂಗಡಿಸಿ ಆದೇಶ ಹೊರಡಿಸಿ ಸರ್ಕಾರಕ್ಕೆ ವರದಿ ಸಲ್ಲಿಸುವುದು.
5. ಕಾಮಗಾರಿಗಳ ಗುಣಮಟ್ಟದ ಬಗ್ಗೆ ಸಂಬಂಧಪಟ್ಟ ಬಿಬಿಎಂಪಿಯ ಪ್ರಧಾನ ಅಭಿಯಂತರರು ಹಾಗೂ ಸಂಬಂಧಪಟ್ಟ ಮುಖ್ಯ ಅಭಿಯಂತರರುಗಳು ನಿಗಾವಹಿಸಿ, ಉತ್ತಮ ಗುಣಮಟ್ಟದ ಆಸ್ತಿ ಸೃಜನೆಗೆ ಕಟ್ಟುನಿಟ್ಟಿನ ಕ್ರಮ ವಹಿಸತಕ್ಕದ್ದು.
6. ಮುಖ್ಯ ಆಯುಕ್ತರು, ಬಿಬಿಎಂಪಿ ರವರು ಕಾಮಗಾರಿಗಳ ಗುಣಮಟ್ಟದ ಬಗ್ಗೆ ಪ್ರತಿಷ್ಠಿತ ಸಂಸ್ಥೆಗಳಿಂದ ಗುಣಮಟ್ಟದ ತಪಾಸಣಾ ಕೈಗೊಂಡು ವರದಿಯನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

. . .5/-

7. ಈ ಆದೇಶದಲ್ಲಿ ಅನುಮೋದನೆ ನೀಡಿರುವ ಕಾಮಗಾರಿಗಳ ಅನುಷ್ಠಾನ ವೇಳಾಪಟ್ಟಿಯನ್ನು ಮುಖ್ಯ ಆಯುಕ್ತರು, ಬಿಬಿಎಂಪಿ ರವರು ತಯಾರಿಸಿ, ಸರ್ಕಾರಕ್ಕೆ ಸಲ್ಲಿಸತಕ್ಕದ್ದು ಹಾಗೂ ಕಾಮಗಾರಿಗಳ ಪ್ರಗತಿ ವರದಿಯನ್ನು ಪ್ರತಿ ಮಾಹೆ ಎಂಪಿಕ್ ಸಭೆಗೆ ಸರ್ಕಾರಕ್ಕೆ ತಪ್ಪದೆ ಸಲ್ಲಿಸತಕ್ಕದ್ದು.
8. ಸರ್ಕಾರವು ಅನುಮೋದನೆ ನೀಡಿರುವ ಕಾಮಗಾರಿಗಳನ್ನು ಬದಲಾವಣೆ ಮಾಡ ತಕ್ಕದ್ದಲ್ಲ. ಯಾವುದಾದರೂ ಅನುಮೋದಿತ ಕಾಮಗಾರಿಯ ಅಗತ್ಯವಿಲ್ಲವೆಂದು ಆ ನಂತರದಲ್ಲಿ ತಿಳಿದುಬಂದಲ್ಲಿ ಸಂಬಂಧಪಟ್ಟ ಅಂದಾಜು ಮೊತ್ತವನ್ನು ಉಳಿತಾಯವೆಂದು ಪರಿಗಣಿಸತಕ್ಕದ್ದು.
9. ಕರ್ನಾಟಕ ಆರ್ಥಿಕ ಸಂಹಿತೆ-1958, ಸಾಧಿಲ್ವಾರು ವೆಚ್ಚ ಕೈಪಿಡಿ ಅಧಿನಿಯಮ ಹಾಗೂ ಕಾಲಕಾಲಕ್ಕೆ ಚಾಲ್ತಿಯಲ್ಲಿರುವ ಎಲ್ಲಾ ಕಾಯ್ದೆ ನಿಯಮಗಳನುಸಾರ ಕ್ರಮವಹಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಲಕ್ಷ್ಮೀಸಾಗರ್ ಎನ್.ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

18/05

**ಇವರಿಗೆ:**

1. ಮಹಾಲೇಖಪಾಲರು, ಲೆಕ್ಕ ತಪಾಸಣೆ/ಲೆಕ್ಕಪತ್ರ, ಕರ್ನಾಟಕ ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಆಡಳಿತಗಾರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಆಪ್ತ ಕಾರ್ಯದರ್ಶಿ, ಬೆಂಗಳೂರು.
6. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
7. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.